Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)

## ವಾರ್ಡ್ ಸಮಿತಿ ಸಭೆ, ದಿನಾಂಕ:20-03-2021 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/13/20-21

ದಿನಾಂಕ: 20-03-2021 ರಂದು ಮದ್ಯಾಹ್ನ 3.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri. Ravi Waddar | A E E. Pulakeshi Nagar Sub-Division |
| 3. | Sri.Akram Nawaz | BWSSB |
| 4. | Smt. Suguna | Revenue Department |
| 5. | Sri. Venkatesh | Horticulture Dept |
| 6. | Sri. Madhu | Junior Health Inspector |
| 7. | Sri. Purushotham | Ward Committee Member |
| 8. | Sri. Syed Ansar Pasha | Ward Committee Member |
| 9. | Sri. Vinod kumar | Ward Committee Member |
| 10. | Sri Gopinath | Ward Committee Member |

ಶ್ರೀ, **ಎಸ್.ವಿಶ್ವನಾಥ** ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 20-03-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಮೋದಿ ಗಾರ್ಡನ್, 6ನೇ ಅಡ್ಡರಸ್ತೆ, ಬಂಗಾರಗಿರಿ ನಗರ ಹಾಗೂ ಮೋದಿ ಗಾರ್ಡನ್ ಸ್ಲಮ್ ಬಳಿ ಕೆಲವು ಸಾರ್ವಜನಿಕರು ತಮ್ಮ ಶೌಚಾಲಯಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಯುಜಿಡಿ ಗೆ ನೀಡದೇ ನೇರವಾಗಿ ಮಳೆನೀರು ಗಾಲುವೆಗೆ ಸಂಪರ್ಕ ಕಲ್ಪಿಸಿರುವುದಾಗಿ ಸಾರ್ವಜನಿಕರು ತಿಳಿಸಿದ್ದು, ಇದರಿಂದ ಮಳೆನೀರು ಗಾಲುವೆಯಲ್ಲಿ ಹೆಚ್ಚಿನ ಪ್ರಮಾಣದ ಹೂಳು ತುಂಬಿ ಮಳೆಗಾಲದಲ್ಲಿ ನೀರು ಕಾಲುವೆಯಿಂದ ಹೊರಬಂದು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ತಿಳಿಸಿರುತ್ತಾರೆ. ಆದ್ದರಿಂದ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲಿಸಿ ಸಂಬಂಧಪಟ್ಟ ಸಾರ್ವಜನಿಕರಿಗೆ ಸೂಚನೆ ನೀಡುವಂತೆ ಹಾಗೂ ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಹಿಂದಿನ ಸಭೆಯಲ್ಲಿ ಸೂಚಿಸಲಾಗಿತ್ತು. ಅದರಂತೆ ಸದರಿ ಸ್ಥಳವನ್ನು ಪರಿಶೀಲಿಸಲಾಗಿ ಮೇಲ್ಕಂಡ ಸ್ಥಳಕ್ಕೆ ಸಂಬಂಧಪಟ್ಟ ಪಕ್ಕದ ವಾರ್ಡ್‌ನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಮಾಹಿತಿ ನೀಡಿರುವುದಾಗಿ ತಿಳಿಸಿರುತ್ತಾರೆ.
2. ವಾರ್ಡ್ ನಂ.47 ರ ವ್ಯಾಪ್ತಿಯಲ್ಲಿ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ವಿಲೇವಾರಿ ವಿಭಾಗ) ರವರಿಗೆ ಈ ಹಿಂದಿನ ಸಭೆಗಳಲ್ಲಿ ಸೂಚಿಲಾಗಿತ್ತು. ಆದರೆ ಈವರೆವಿಗೆ ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸಲಾಗಿಲ್ಲ ಎಂದು ತಿಳಿದು ಬಂದಿದ್ದು, ಹೆಚ್ಚುವರಿ ಮಾರ್ಷಲ್‌ಗಳ ನಿಯೋಜನೆ ಕುರಿತಂತೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವಂತೆ ಈ ಹಿಂದಿನ ಸಭೆಗಳಲ್ಲಿ ಸೂಚಿಸಲಾಗಿದ್ದರೂ, ಈವರೆವಿಗೆ ಹೆಚ್ಚುವರಿ ಮಾರ್ಷಲ್ ಗಳ ನಿಯೋಜನೆ ಆಗಿಲ್ಲದಿರುವುದನ್ನು ಗಮನಿಸಿ ಸ.ಕಾ.ಅ (ಘನತ್ಯಾಜ್ಯ

ವಿಲೇವಾರಿ ಘಟಕ) ರವರಿಗೆ ಕೂಡಲೇ ಪ್ರಸ್ಥಾವನೆ ಸಲ್ಲಿಸಿ ಆದ್ಯತೆಯ ಮೇರೆಗೆ ಅನುಮೋದನೆ ಪಡೆದುಕೊಳ್ಳಲು ಅಗತ್ಯ ಕ್ರಮಕ್ಕಾಗಿ ಸೂಚಿಸಲಾಯಿತು.

3. ಸಿ.ಎನ್.ಎ ಪದವಿ ಪೂರ್ವ ಕಾಲೇಜ್ ಪಕ್ಕದ ಬೀದಿಯಲ್ಲಿ ನೀರು ಸರಬರಾಜು ಪೈಪ್‌ಲೈನ್ ಲೀಕೇಜ್ ಆಗುತ್ತಿದ್ದು, ಇದನ್ನು ಕೂಡಲೇ ಸರಿಪಡಿಸುವಂತೆ ಹಾಗೂ ವಿನಾಯಕ ಟಾಕೀಸ್ ಹತ್ತಿರ ನೀರು ಸರಬರಾಜು ಪೈಪ್‌ಲೈನ್ ನಲ್ಲಿ ಅಳವಡಿಸಲಾಗಿರುವ ಗೇಟ್‌ವಾಲ್ವ್ ಬದಲಾಯಿಸಿ ಈಗ ಪೈಪ್‌ಲೈನ್ ನಲ್ಲಿ ಕೊಳಚೆ ನೀರು ಮಿಶ್ರಿತ ಗೊಂಡು ಸರಬರಾಜಾಗುತ್ತಿರುವುದು ಸಭೆಯಲ್ಲಿ ಹಾಜರಿದ್ದ ವಿನೋದ್‌ಕುಮಾರ್‌ರವರು ಗಮನಕ್ಕೆ ತಂದಿದ್ದು, ಕೂಡಲೇ ಸರಿಪಡಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.

4. ದೇವೆಗೌಡ ರಸ್ತೆಯಲ್ಲಿ ಮಿಲಟರಿ ಕಾಂಪೌಂಡ್ ಗೆ ಹೊಂದಿಕೊಂಡಂತೆ ಹಾಗೂ ರಸ್ತೆಯ ಉದ್ದಕ್ಕೂ ಅಗಾದ ಪ್ರಮಾಣದ ಕಸ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯ ಸುರಿದಿದ್ದು, ಇವುಗಳನ್ನು ತೆರವುಗೊಳಿಸುವಂತೆ ಶ್ರೀಮತಿ.ಪ್ರೀತಿ ರವರು ಮೇಲಾಧಿಕಾರಿಗಳ ಗಮನಕ್ಕೆ ತಂದಿದ್ದು, ಅದರಂತೆ ದೇವೆಗೌಡ ರಸ್ತೆಯಲ್ಲಿ ಸುರಿದರಿರುವ ತ್ಯಾಜ್ಯ ಹಾಗೂ ಕಟ್ಟಡ ನಿರ್ಮಾಣ ತ್ಯಾಜ್ಯವನ್ನು ತೆರವುಗೊಳಿಸಲು ಸಂಬಂಧಪಟ್ಟ ಘನತ್ಯಾಜ್ಯ ವಿಲೇವಾರಿ ಘಟಕ ಹಾಗೂ ಕಾಮಗಾರಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಸೂಚಿಸಲಾಯಿತ

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.

12ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.

08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47